Akashvani: Bangalore
National Bulletin In Kannada
01.04.2026: 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

01.04.2026: 7.35AM

********

**ಮುಖ್ಯಾಂಶಗಳು**

1. ರಾಷ್ಟ್ರಪತಿ ದ್ರೌಪದಿ ಮುರ್ಮು ಕರ್ನಾಟಕ ಭೇಟಿ; ತುಮಕೂರಿನಲ್ಲಿಂದು ಡಾ. ಶಿವಕುಮಾರ ಸ್ವಾಮಿಗಳ ೧೧೯ನೇ ಜಯಂತಿಯಲ್ಲಿ ಭಾಗಿ
2. ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ಭಾರತ ಪರಿಸ್ಥಿತಿಯನ್ನು ಹತೋಟಿಯಲ್ಲಿಟ್ಟಿದೆ - ಪ್ರಧಾನಿ ನರೇಂದ್ರ ಮೋದಿ
3. ಮೊದಲ ಹಂತದ ಜನಗಣತಿ-೨೦೨೭ ಇಂದಿನಿಂದ ಆರಂಭ; ಈ ಬಾರಿ ಸಂಪೂರ್ಣ ಡಿಜಿಟಲ್ ಗಣತಿ
4. ಇಂದಿನಿಂದ ಹೊಸ ಹಣಕಾಸು ವರ್ಷ ಆರಂಭ; ಪ್ರಮುಖ ಆರ್ಥಿಕ ಬದಲಾವಣೆಗಳು ಜಾರಿ
5. ೧೬ನೇ ಹಾಕಿ ಇಂಡಿಯಾ ರಾಷ್ಟ್ರೀಯ ಸಬ್-ಜೂನಿಯರ್ ಮಹಿಳಾ ಹಾಕಿ ಚಾಂಪಿಯನ್‌ಶಿಪ್-೨೦೨೬ ರಾಂಚಿಯಲ್ಲಿಂದು ಆರಂಭ

*********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಕರ್ನಾಟಕದ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಡೆಯಲಿರುವ ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದ್ದು, ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ತುಮಕೂರು ನಗರದಲ್ಲಿ ವಾಹನ ಸಂಚಾರವನ್ನು ಮಾರ್ಪಡಿಸಲಾಗಿದೆ.  ನಿನ್ನೆ ರಾತ್ರಿ ಬೆಂಗಳೂರಿಗೆ ಆಗಮಿಸಿದ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬರಮಾಡಿಕೊಂಡರು.

*********

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ಭಾರತ ಪರಿಸ್ಥಿತಿಯನ್ನು ಹತೋಟಿಯಲ್ಲಿಟ್ಟಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಗುಜರಾತ್‌ನ ವಾವ್-ಥರಾದ್ ಜಿಲ್ಲೆಯಲ್ಲಿ ನಿನ್ನೆ ಸುಮಾರು ೨೦ ಸಾವಿರ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಪ್ರಭಾವ ದೇಶದ ನಾಗರಿಕರ ಮೇಲೆ ಉಂಟಾಗದಂತೆ ಎಚ್ಚರಿಕೆ ವಹಿಸಿದೆ ಎಂದರು. ಚಾಲನೆ ನೀಡಲಾಗಿರುವ ಯೋಜನೆಗಳು ಈ ವಲಯದ ಸಾಮಾಜಿಕ ಆರ್ಥಿಕ ಅಭಿವೃದ್ಧಿ ಮತ್ತು ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

*****ಧ್ವನಿ***** ಪಿಎಂ

ಇದಕ್ಕೂ ಮುನ್ನ, ಸಾನಂದ್‌ನಲ್ಲಿ ಕೇನ್ಸ್ ಸೆಮಿಕಂಡೆಕ್ಟರ್ ಘಟಕ ಉದ್ಘಾಟಿಸಿದ ಪ್ರಧಾನಿ, ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಪ್ರಮುಖ ಪಾಲುದಾರ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ ಎಂದರು.

*********

ವಿಶ್ವದ ಅತಿದೊಡ್ಡ ಜನಗಣತಿ ಪ್ರಕ್ರಿಯೆ ಎನಿಸಿಕೊಂಡಿರುವ ಭಾರತದ ಜನಗಣತಿ-೨೦೨೭ರ ಮೊದಲ ಹಂತ ಇಂದಿನಿಂದ ಆರಂಭವಾಗಲಿದೆ. ಇದೇ ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ರೂಪದಲ್ಲಿ ನಡೆಯುತ್ತಿರುವ ಈ ಗಣತಿಯಲ್ಲಿ ನಾಗರಿಕರಿಗೆ ಸ್ವಯಂ ಗಣತಿ ಆಯ್ಕೆಯನ್ನು ನೀಡಲಾಗಿದೆ. ಇಂದಿನಿಂದ ಈ ತಿಂಗಳ ೧೫ರ ವರೆಗೆ ಸ್ವಯಂಗಣತಿ ನಡೆಯಲಿದ್ದು, ಕರ್ನಾಟಕ, ಗೋವಾ, ಒಡಿಶಾ, ಸಿಕ್ಕಿಂ, ಮಿಜೋರಾಂ ಸೇರಿದಂತೆ ರಾಜ್ಯ ಹಾಗೂ ವಿವಿಧ ಕೇಂದ್ರಾಡಳಿತ ಪ್ರದೇಶಗಳಲ್ಲಿ ಇದೇ ೧೬ರಿಂದ ಮೇ ೧೫ರ ವರೆಗೆ ಮನೆಗಳ ಪಟ್ಟಿ ತಯಾರಿಕೆ ಮತ್ತು ವಸತಿ ಗಣತಿ ಕಾರ್ಯ ನಡೆಯಲಿದೆ.

*********

ಇಂದಿನಿಂದ ಹೊಸ ಹಣಕಾಸು ವರ್ಷ ಆರಂಭವಾಗಿದ್ದು, ಪ್ರಮುಖ ಆರ್ಥಿಕ ಬದಲಾವಣೆಗಳು ಜಾರಿಗೆ ಬರಲಿವೆ. ಆರು ದಶಕಗಳ ಹಳೆಯ ಆದಾಯ ತೆರಿಗೆ ಕಾಯ್ದೆಯ ಬದಲಿಗೆ ಹೊಸ ಆದಾಯ ತೆರಿಗೆ ಕಾಯ್ದೆ-೨೦೨೫ ಜಾರಿಗೆ ಬರಲಿದ್ದು, ಇದು ತೆರಿಗೆ ವ್ಯವಸ್ಥೆಯನ್ನು ಸರಳಗೊಳಿಸಲಿದೆ. ಭಾರತೀಯ ರಿಸರ್ವ್ ಬ್ಯಾಂಕ್ ನಿರ್ದೇಶನದಂತೆ ಎಲ್ಲಾ ಡಿಜಿಟಲ್ ಪಾವತಿ ವಹಿವಾಟುಗಳಿಗೆ

ಎರಡು ಬಾರಿ ದೃಢೀಕರಣ ಇಂದಿನಿಂದ ಕಡ್ಡಾಯವಾಗಲಿದೆ. ಇದರ ಜೊತೆಗೆ ೨೦೨೫-೨೬ನೇ ಸಾಲಿನ ಪರಿಷ್ಕೃತ ಫಾಸ್ಟ್ಯಾಗ್ ವಾರ್ಷಿಕ ಪಾಸ್ ಶುಲ್ಕ ಕೂಡ ಇಂದಿನಿಂದ ಜಾರಿಯಾಗಲಿದ್ದು, ಪ್ಯಾನ್ ಕಾರ್ಡ್ ಅರ್ಜಿ ಸಲ್ಲಿಕೆಯ ಮತ್ತು ಹೊಸ ನಿಮಯಗಳು ಸಹ ಇಂದಿನಿಂದ ಜಾರಿಗೆ ಬರಲಿವೆ.

*********

ಲೋಕಸಭೆಯಲ್ಲಿಂದು ವಿದೇಶಿ ಕೊಡುಗೆ ನಿಯಂತ್ರಣ ತಿದ್ದುಪಡಿ ವಿಧೇಯಕ-೨೦೨೫ ಮತ್ತು ಜನವಿಶ್ವಾಸ್ ನಿಬಂಧನೆಗಳ ತಿದ್ದುಪಡಿ ವಿಧೇಯಕ-೨೦೨೫ ಕುರಿತು ಚರ್ಚೆ ನಡೆಯಲಿದೆ. ಸುಲಭ ಜೀವನ ಮತ್ತು ಸುಲಭ ವ್ಯಾಪಾರಕ್ಕೆ ಪೂರಕವಾಗಿ ಕೆಲವು ಅಪರಾಧಗಳನ್ನು ಅಪರಾಧ ಮುಕ್ತಗೊಳಿಸುವ ಉದ್ದೇಶವನ್ನು ಈ ವಿಧೇಯಕ ಹೊಂದಿದೆ. ರಾಜ್ಯಸಭೆಯಲ್ಲಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಾಮಾನ್ಯ ಆಡಳಿತ ವಿಧೇಯಕ-೨೦೨೫ ಮತ್ತು ಇನ್‌ಸಾಲ್ವೆನ್ಸಿ ಹಾಗೂ ದಿವಾಳಿತನ ಸಂಹಿತೆ ತಿದ್ದುಪಡಿ ವಿಧೇಯಕ-೨೦೨೫ ಚರ್ಚೆಗೆ ಬರಲಿದೆ.

*********

೨೦೨೫-೨೬ನೇ ಸಾಲಿನ ಕೇಂದ್ರ ಆಯವ್ಯಯದ ಹಣಕಾಸು ಪ್ರಸ್ತಾವನೆಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ನಿನ್ನೆ ಕೇಂದ್ರ ಸರ್ಕಾರ 'ಹಣಕಾಸು ಕಾಯ್ದೆ ೨೦೨೫' ಅನ್ನು ಅಧಿಕೃತವಾಗಿ ಅಧಿಸೂಚಿಸಿದೆ. ಈ ಕಾಯ್ದೆಗೆ ಮಾರ್ಚ್ ೩೦ರಂದು ರಾಷ್ಟ್ರಪತಿಗಳು ಅಂಕಿತ ಹಾಕಿದ್ದು, ಇಂದಿನಿಂದ ಆರಂಭವಾಗುವ ಹೊಸ ಹಣಕಾಸು ವರ್ಷದಿಂದ ಇದು ಜಾರಿಗೆ ಬರುತ್ತಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ತಿಳಿಸಿದೆ. ಕಳೆದ ಶುಕ್ರವಾರವಷ್ಟೇ ಸಂಸತ್ತು ಈ ವಿಧೇಯಕಕ್ಕೆ ಅನುಮೋದನೆ ನೀಡಿತ್ತು. ಲೋಕಸಭೆಯು ಮಾರ್ಚ್ ೨೫ರಂದು ೩೨ ತಿದ್ದುಪಡಿಗಳೊಂದಿಗೆ ಇದನ್ನು ಅಂಗೀಕರಿಸಿದ್ದರೆ, ರಾಜ್ಯಸಭೆಯು ಸುದೀರ್ಘ ಚರ್ಚೆಯ ನಂತರ ಧ್ವನಿಮತದ ಮೂಲಕ ವಿಧೇಯಕವನ್ನು ಲೋಕಸಭೆಗೆ ಮರಳಿಸಿ ಶಾಸನಬದ್ಧ ಪ್ರಕ್ರಿಯೆಯನ್ನು ಪೂರ್ಣಗೊಳಿಸಿತ್ತು.೨೦೨೫-೨೬ನೇ ಸಾಲಿನ ಬಜೆಟ್‌ನಲ್ಲಿ ಒಟ್ಟು ೫೩.೪೭ ಲಕ್ಷ ಕೋಟಿ ರೂಪಾಯಿಗಳ ವೆಚ್ಚವನ್ನು ಅಂದಾಜಿಸಲಾಗಿದ್ದು, ಇದು ಪ್ರಸಕ್ತ ಹಣಕಾಸು ವರ್ಷಕ್ಕಿಂತ ಶೇಕಡಾ ೭.೭ ರಷ್ಟು ಹೆಚ್ಚಳವಾಗಿದೆ. ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಗೆ ಪೂರಕವಾಗಿ ಬೃಹತ್ ಮೂಲಸೌಕರ್ಯ ಯೋಜನೆಗಳಿಗಾಗಿ ೧೨.೨ ಲಕ್ಷ ಕೋಟಿ ರೂಪಾಯಿಗಳ ಬಂಡವಾಳ ವೆಚ್ಚವನ್ನು ಮೀಸಲಿಡಲಾಗಿದೆ. ಬೃಹತ್ ಯೋಜನೆಗಳ ಅಭಿವೃದ್ಧಿಯನ್ನು ಚುರುಕುಗೊಳಿಸಲು

’ಮೂಲಸೌಕರ್ಯ ಅಪಾಯ ಅಭಿವೃದ್ಧಿ ನಿಧಿ’ಯನ್ನು ಸ್ಥಾಪಿಸುವುದಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಅಲ್ಲದೆ, ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇಕಡಾ ೪.೩ ಕ್ಕೆ ಇಳಿಸುವ ಗುರಿಯನ್ನು ಹೊಂದಲಾಗಿದ್ದು, ಇದು ಆರ್ಥಿಕ ಸ್ಥಿರತೆಯೊಂದಿಗೆ ಸುಸ್ಥಿರ ಬೆಳವಣಿಗೆಯನ್ನು ಸಾಧಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

*********

ಇರಾನ್ ಜೊತೆಗಿನ ಉದ್ವಿಗ್ನತೆ ಉಲ್ಬಣಗೊಳ್ಳುತ್ತಿದ್ದರೂ, ಹಾರ್ಮುಜ್ ಜಲಸಂಧಿಯ ಭದ್ರತಾ ಕಾರ್ಯದಿಂದ ಅಮೆರಿಕಾದ ಮಿಲಿಟರಿ ಪಡೆಗಳನ್ನು ಹಿಂತೆಗೆದುಕೊಳ್ಳಲು ಸಾಧ್ಯವಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಸುದ್ದಿವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಅಂತಾರಾಷ್ಟ್ರೀಯ ಮಿತ್ರ ರಾಷ್ಟ್ರಗಳು ಈ ನಿರ್ಣಾಯಕ ಹಡಗು ಸಾಗಾಣೆ ಮಾರ್ಗದ ರಕ್ಷಣೆಯಲ್ಲಿ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಅಮೆರಿಕ - ಇಸ್ರೇಲ್ ಜಂಟಿ ಪಡೆಗಳು ಹಾಗೂ ಇರಾನ್ ನಡುವಿನ ಸಂಘರ್ಷದಲ್ಲಿ ಯುಕೆಯಂತಹ ರಾಷ್ಟ್ರಗಳಿಂದ ಮಿಲಿಟರಿ ಬೆಂಬಲದ ಕೊರತೆಯಿದೆ ಎಂದಿದ್ದಾರೆ. ಹಡುಗಗಳ ಮೇಲೆ ಮತ್ತು ಪ್ರಾದೇಶಿಕ ಮೂಲಸೌಕರ್ಯಗಳ ಮೇಲೆ ಇರಾನ್ ನಿರಂತರವಾಗಿ ದಾಳಿ ನಡೆಸುತ್ತಿದ್ದರೂ ಸಹ ಹಾರ್ಮೂಜ್ ಜಲಸಂಧಿಯಲ್ಲಿ ಯಾವುದೇ ನಿಜವಾದ ಬೆದರಿಕೆ ಇಲ್ಲ ಎಂದು ಅಧ್ಯಕ್ಷ ಟ್ರಂಪ್ ಪ್ರತಿಪಾದಿಸಿದ್ದಾರೆ.

*********

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ನಿನ್ನೆ ಸಂಜೆ ಪೋರ್ಚುಗಲ್ ವಿದೇಶಾಂಗ ಸಚಿವ ಪೌಲೋ ರಾಂಗೆಲ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಉಭಯ ನಾಯಕರು ಪಶ್ಚಿಮ ಏಷ್ಯಾ ಸಂಘರ್ಷದ ಬಗ್ಗೆ ವಿಚಾರ ವಿನಿಮಯ ಮಾಡಿಕೊಂಡಿದ್ದು, ಭಾರತ - ಪೋರ್ಚುಗಲ್ ನಡುವಿನ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಬಗ್ಗೆಯೂ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

*********

ರಷ್ಯಾದ AN -೨೬ ಮಿಲಿಟರಿ ಸಾರಿಗೆ ವಿಮಾನವು ಕ್ರೈಮಿಯಾದಲ್ಲಿ ಬಂಡೆಗೆ ಡಿಕ್ಕಿ ಹೊಡೆದಿದ್ದು, ವಿಮಾನದಲ್ಲಿದ್ದ ೨೯ ಜನರು ಸಾವನ್ನಪ್ಪಿದ್ದಾರೆ. ಈ ಹಿಂದೆ ಸಂವಹನ ಕಳೆದುಕೊಂಡಿದ್ದ ವಿಮಾನವು ಕ್ರೈಮಿಯಾ ಪರ್ಯಾಯ ದ್ವೀಪದಲ್ಲಿ ಬಂಡೆಗೆ ಡಿಕ್ಕಿ ಹೊಡೆದು ೨೩ ಪ್ರಯಾಣಿಕರು ಮತ್ತು ಆರು ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಪ್ರಾಥಮಿಕ ವರದಿಯ ಪ್ರಕಾರ, ತಾಂತ್ರಿಕ ಸಮಸ್ಯೆಗಳು ಅಪಘಾತಕ್ಕೆ ಕಾರಣವೆಂದು ನಂಬಲಾಗಿದೆ.

*********

೧೬ನೇ ಹಾಕಿ ಇಂಡಿಯಾ ರಾಷ್ಟ್ರೀಯ ಸಬ್-ಜೂನಿಯರ್ ಮಹಿಳಾ ಹಾಕಿ ಚಾಂಪಿಯನ್‌ಶಿಪ್-೨೦೨೬ ರಾಂಚಿಯಲ್ಲಿಂದು ಪ್ರಾರಂಭವಾಗಲಿದ್ದು, ಈ ತಿಂಗಳ ೧೨ರ ವರೆಗೆ ನಡೆಯಲಿದೆ. ಇಂದು ಬೆಳಿಗ್ಗೆ ಪಂದ್ಯಗಳು ಪ್ರಾರಂಭವಾಗಲಿದ್ದು, ಸಂಜೆ ೪:೩೦ಕ್ಕೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಈ ಸಮಾರಂಭದಲ್ಲಿ ಕ್ರೀಡಾ ಮತ್ತು ಯುವಜನ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ಮುಖೇಶ್ ಕುಮಾರ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

*********

ನವಚಂಡಿಗಢದಲ್ಲಿರುವ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನ ४ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವು ಗೆಲುವು ದಾಖಲಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ಆರು ವಿಕೆಟ್‌ಗಳಿಗೆ ೧೬೨ ರನ್‌ಗಳಿಸಿತು, ೧೬೩ ರನ್ ಗಳ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ತಂಡವು ಕೂಪರ್ ಕೊನೊಲಿ ಅವರ ಅಜೇಯ ೭೨ ರನ್‌ಗಳ ನೆರವಿನಿಂದ ೧೯.೧ ಓವರ್‌ಗಳಲ್ಲಿ ೭ ವಿಕೆಟ್ ಕಳೆದುಕೊಂಡು ಗೆಲುವಿನ ನಗೆ ಬೀರಿತು. ಕೂಪರ್ ಕೊನೊಲಿ ಅವರು ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಲಖನೌನ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಕ್ರಿಕೆಟ್‌ನ ಐದನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವು ದೆಹಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯವು ರಾತ್ರಿ ೭:೩೦ಕ್ಕೆ ಪ್ರಾರಂಭವಾಗಲಿದೆ.

*****END****